ಆಸ್ಪತ್ರೆಗಳಿಗೆ ಮೂಲಭೂತ ಸೌಲಭ್ಯಗಳು

285 (657) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಹಾಗೂ ಗುಡಿಬಂಡೆ ತಾಲ್ಲೂಕುಗಳಲ್ಲಿ 100 ಹಾಸಿಗೆಯುಳ್ಳ ಆಸ್ಪತ್ರೆಯು ಮಂಜೂರಾಗಿದ್ದು, ಈ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಬೇಕಾದಂತಹ ಮೂಲಭೂತ ಸಲಕರಣೆಗಳು, ಹಾಸಿಗೆಗಳು, ವೈದ್ಯರು, ಸಿಬ್ಬಂದಿಗಳು ಹಾಗೂ ಕಟ್ಟಡ ವ್ಯವಸ್ಥೆ ಇಲ್ಲದೇ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮವೇನು ?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಮತ್ತು ಆ) ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕು ಆಸ್ಪತ್ರೆಗಳನ್ನು 100 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೆ ಏರಿಸಲಾಗಿದೆ. ಅದಕ್ಕೆ ಅನುಗುಣವಾಗಿ, ಕಟ್ಟಡಗಳ ನಿರ್ಮಾಣ ಕಾರ್ಯವನ್ನು ತೆಗೆದುಕೊಂಡಿದ್ದು, ಬಾಗೇಪಲ್ಲಿ ಆಸ್ಪತ್ರೆಯ ಕಟ್ಟಡ ಕಾಮಗಾರಿ ಇತ್ತೀಚೆಗೆ ಪೂರ್ಣಗೊಂಡಿದೆ ಹಾಗೂ ಗುಡಿಬಂಡೆ ಆಸ್ಪತ್ರೆಯ ಕಟ್ಟಡ ಕಾಮಗಾರಿಯು ಮುಕ್ತಾಯದ ಹಂತದಲ್ಲಿದೆ. ಈ ಎರಡೂ ಆಸ್ಪತ್ರೆಗಳು ತಲಾ 50 ಹಾಸಿಗೆಗಳ ಸಾಮರ್ಥ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ.

ಬಾಗೇಪಲ್ಲಿ ಸಾರ್ವಜನಿಕ ಆಸ್ಪತ್ರೆಯಲ್ಲಿ 6 ತಜ್ಞ ವೈದ್ಯರ ಹಾಗೂ 1 ದಂತ ವೈದ್ಯಧಿಕಾರಿಯ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 3 ತಜ್ಞ ವೈದ್ಯರ ಹಾಗೂ ದಂತ ವೈದ್ಯರ ಹುದ್ದೆಗಳು ಭರ್ತಿಯಾಗಿವೆ ಮತ್ತು 3 ಹುದ್ದೆಗಳು ಖಾಲಿ ಇವೆ. ಮುಂದುವರೆದು, ಈ ಆಸ್ಪತ್ರೆಗೆ 24 ಇತರೆ ವೃಂದದ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 20 ಹುದ್ದೆಗಳು ಭರ್ತಿಯಾಗಿವೆ ಹಾಗೂ 4 ಗ್ರೂಪ್–ಡಿ ಹುದ್ದೆಗಳು ಮಾತ್ರ ಖಾಲಿ ಇವೆ.

ಸದರಿ ಆಸ್ಪತ್ರೆಯು ಪ್ರಸ್ತುತ 50 ಹಾಸಿಗೆಗಳ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅದಕ್ಕನುಗುಣವಾಗಿ ಮೂಲ ಸೌಕರ್ಯ ಒದಗಿಸಲಾಗಿದೆ.

ಗುಡಿಬಂಡೆ ಸಾರ್ವಜನಿಕ ಆಸ್ಪತ್ರೆಯಲ್ಲಿ 5 ತಜ್ಞ ವೈದ್ಯರ ಹುದ್ದೆಗಳು ಹಾಗೂ 1 ದಂತ ವೈದ್ಯರ ಹುದ್ದೆ ಮಂಜೂರಾಗಿವೆ. ಈ ಪೈಕಿ, 4 ತಜ್ಞ ವೈದ್ಯರ ಹುದ್ದೆಗಳು ಭರ್ತಿಯಾಗಿವೆ ಮತ್ತು 1 ತಜ್ಞ ವೈದ್ಯ ಹಾಗೂ 1 ದಂತ ವೈದ್ಯ ಹುದ್ದೆಗಳು ಖಾಲಿ ಇವೆ. ಮುಂದುವರೆದು, ಈ ಆಸ್ಪತ್ರೆಗೆ 27 ಇತರೆ ವೃಂದದ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 14 ಹುದ್ದೆಗಳು ಭರ್ತಿಯಾಗಿವೆ ಹಾಗೂ 13 ಹುದ್ದೆಗಳು ಖಾಲಿ ಇವೆ. ಖಾಲಿ ಇರುವ ಹುದ್ದೆಗಳ ಪೈಕಿ 8 ಗ್ರೂಪ್-ಡಿ ಹುದ್ದೆಗಳಾಗಿರುತ್ತವೆ.

ಸದರಿ ಆಸ್ಪತ್ರೆಯ 100 ಹಾಸಿಗೆಗಳ ಸಾಮರ್ಥ್ಯದ ಕಟ್ಟಡ ಕಾಮಗಾರಿಯು ಪೂರ್ಣಗೊಳ್ಳುವ ಹಂತದಲ್ಲಿದೆ. ಈ ಆಸ್ಪತ್ರೆಯು ಪ್ರಸ್ತುತ 50 ಹಾಸಿಗೆಗಳ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅದಕ್ಕನುಗುಣವಾಗಿ ಮೂಲ ಸೌಕರ್ಯ ಒದಗಿಸಲಾಗಿದೆ.

ಮಂಜೂರಾದ ಅನುದಾನ

250 (412) ಶ್ರೀ ಮಂಜುನಾಥ ಹೆಚ್.ಪಿ. (ಹುಣಸೂರು) :- ಮಾನ್ಯ ಪಶುಸಂಗೋಪನೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿಗೆ ಪಶು ಸಂಗೋಪನಾ ಇಲಾಖೆಯಿಂದ 2009-10ನೇ ಸಾಲಿನಿಂದ ಪ್ರಸಕ್ತ ಸಾಲಿನವರೆಗೂ ಮಂಜೂರಾದ ಅನುದಾನವೆಷ್ಟು ; (ಯೋಜನಾವಾರು ವಿವರ ನೀಡುವುದು)

ಆ) ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ?

ಶ್ರೀ ರೇವೂನಾಯಕ್ ಬೆಳಮಗಿ (ಮಾನ್ಯ ಪಶುಸಂಗೋಪನೆ ಸಚಿವರು):-

ಅ) ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿಗೆ ಪಶುಸಂಗೋಪನಾ ಇಲಾಖೆಯಲ್ಲಿ 2009-10ನೇ ಸಾಲಿನಿಂದ ಇದುವರೆವಿಗೂ ಮಂಜೂರಾದ ಅನುದಾನದ ವಿವರಗಳು